## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 761(770) |
| ಸದಸ್ಯರ ಹೆಸರು | : ಶ್ರೀಮತಿ.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 20-12-2021 |
| ಉತ್ತರಿಸುವ ಸಚಿವರು | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೆಲವು ಖಾಸಗಿ ಸಂಸ್ಥೆಗಳು 2021-22ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ, ಆನ್‌ಲೈನ್ ತರಗತಿಗಳನ್ನು ಸಂಪೂರ್ಣವಾಗಿ ನಿಲ್ಲಿಸಿ, ವಿದ್ಯಾರ್ಥಿಗಳನ್ನು ಆಫ್ ಲೈನ್ ತರಗತಿಗಳನ್ನೇ ತೆಗೆದುಕೊಳ್ಳಬೇಕೆಂದು ಕಡ್ಡಾಯ ಮಾಡಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | 2021-22ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ, ಆನ್‌ಲೈನ್ ತರಗತಿಗಳನ್ನು ಸಂಪೂರ್ಣವಾಗಿ ನಿಲ್ಲಿಸಿ, ವಿದ್ಯಾರ್ಥಿಗಳನ್ನು ಆಫ್‌ಲೈನ್ ತರಗತಿಗಳನ್ನೇ ತೆಗೆದುಕೊಳ್ಳಬೇಕೆಂದು ಕಡ್ಡಾಯಗೊಳಿಸಿರುವುದಿಲ್ಲ. |
| ಆ) | ಬಂದಿದ್ದಲ್ಲಿ ಕೆಲವು ಶಿಕ್ಷಣ ಸಂಸ್ಥೆಗಳ ಈ ರೀತಿಯ ಅವೈಜ್ಞಾನಿಕ ನಿರ್ಣಯದಿಂದ ಪಾಲಕರು ಅತಂಕಕ್ಕೊಳಗಾಗಿದ್ದು, ಕೋವಿಡ್ ಹಿನ್ನಲೆಯಲ್ಲಿ ಎಲ್ಲಾ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಹೈಬ್ರಿಡ್ (ಅನ್ ಲೈನ್ ಮತ್ತು ಆಫ್ ಲೈನ್ ಎರಡೂ) ಮಾದರಿಯಲ್ಲಿ ತರಗತಿಗಳನ್ನು ನಡೆಬೇಕೆಂಬ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ:ಸಿ4(6)ಪ್ರೌ.ಶಿ/ಶಾ.ಕಾ.ಪ್ರ/48/ 2021-22, ದಿನಾಂಕ:04.10.2021 ರಲ್ಲಿ 6 ರಿಂದ 10ನೇ ತರಗತಿಯವರೆಗೆ ಪೂರ್ಣ ಪ್ರಮಾಣದಲ್ಲಿ ಭೌತಿಕವಾಗಿ ಶಾಲೆಗಳನ್ನು ಪ್ರಾರಂಭಿಸಲು ಅನುಮತಿಸಲಾಗಿದೆ. ಮುಂದುವರೆದು, ದಿನಾಂಕ: 21/10/2021ರಲ್ಲಿ 01 ರಿಂದ 05ನೇ ತರಗತಿ (ರಾಜ್ಯದಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ) ಶಾಲೆಗಳನ್ನು ಹಂತ ಹಂತವಾಗಿ ಷರತ್ತುಗಳನ್ನು ವಿಧಿಸಿ ಭೌತಿಕವಾಗಿ ಆರಂಭಿಸಲು ಒಪ್ಪಿಗೆ ಸೂಚಿಸಿದೆ. ಶಾಲೆಗಳಿಗೆ ಹಾಜರಾಗುವಂತಹ ಮಕ್ಕಳ ಪೋಷಕರ ಒಪ್ಪಿಗೆ ಪತ್ರ ಕಡ್ಡಾಯಪಡಿಸಲಾಗಿದೆ. |

| | | |
|---|---|---|
| ಇ) | ಕೋವಿಡ್ ಹಿನ್ನಲೆಯಲ್ಲಿ ಹೈಬ್ರಿಡ್ (ಅನ್ ಲೈನ್ ಮತ್ತು ಆಫ್ ಲೈನ್ ಎರಡೂ) ಮಾದರಿಯಲ್ಲಿ ತರಗತಿಗಳನ್ನು ನಡೆಸದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ? | ಆನ್‌ಲೈನ್ ಮತ್ತು ಆಫ್ ಲೈನ್ ಎರಡೂ ತರಗತಿಗಳನ್ನು ನಡೆಸದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಬಗ್ಗೆ ಯಾವುದೇ ದೂರುಗಳು ಸ್ವೀಕೃತಿಯಾಗಿರುವುದಿಲ್ಲ. |

ಇಪಿ 407 ಪಿಜಿಸಿ 2021

[ಬಿ.ಸಿ. ನಾಗೇಶ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.